ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 08–12–2020

## ಪತ್ರಿಕಾ ಪ್ರಕಟಣೆ

## ನೀರಾವರಿ ಭೂಮಿ ಖರೀದಿಸಿದರೆ ಅದನ್ನು ಕೃಷಿಗೆ ಮಾತ್ರ ಬಳಸಬೇಕು : ಬಿ.ಎಸ್.ಯಡಿಯೂರಪ್ಪ

ಬೆಂಗಳೂರು, ಡಿಸೆಂಬರ್ 08 (ಕರ್ನಾಟಕ ವಾರ್ತೆ) : ನೀರಾವರಿ ಭೂಮಿ ಖರೀದಿಸಿದರೆ ಅದನ್ನು ಕೃಷಿಗೆ ಮಾತ್ರ ಬಳಕೆ ಮಾಡಬೇಕು ಎಂಬ ಷರತ್ತು ಹಾಕಿದ್ದೇವೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದರು.

ಅವರು ಇಂದು ವಿಧಾನಪರಿಷತ್‌ನಲ್ಲಿ ಮರಿತಿಬ್ಬೇಗೌಡ ಅವರು, ಕರ್ನಾಟಕ ಭೂಸುಧಾರಣಾ ವಿಧೇಯಕ ಕುರಿತ ಚರ್ಚೆಯಲ್ಲಿ ಮಾತನಾಡಿದಾಗ, ಮುಖ್ಯಮಂತ್ರಿಗಳು ಮಾತನಾಡಿ ಭೂ ಸುಧಾರಣಾ ಕಾಯ್ದೆಯಲ್ಲಿ 79 ಎ,ಬಿ ನಿಬಂಧನೆಗಳು ಅನೇಕ ರಾಜ್ಯಗಳಲ್ಲಿ ಇಲ್ಲ. ಮಹಾರಾಷ್ಟ್ರ, ತೆಲಂಗಾಣ, ಕೇರಳ, ತಮಿಳುನಾಡು ಆಂಧ್ರಪ್ರದೇಶದಲ್ಲಿಯೂ ಇಲ್ಲ. ಕರ್ನಾಟಕದಲ್ಲಿ ಮಾತ್ರ ಇದ್ದು ಅದನ್ನು ತೆಗೆದು ಹಾಕಿದ್ದೇವೆ ಎಂದರು.

ರೈತರು ಬುದ್ಧಿವಂತರಾಗಿದ್ದು, ಕಾನೂನು ಬಂದ ತಕ್ಷಣ ಯಾವ ರೈತರು ಭೂಮಿ ಮಾರಿಕೊಳ್ಳುವುದಿಲ್ಲ. ಅವರಿಗೆ ಈ ಕುರಿತು ತಿಳುವಳಿಕೆ ಇದೆ ಎಂದ ಮುಖ್ಯಮಂತ್ರಿಗಳು, ಸರ್ಕಾರವು ರೈತರಿಗೆ ತೊಂದರೆಯಾಗುವ ಯಾವುದೇ ಕಾನೂನುಗಳನ್ನು ಜಾರಿಗೆ ತರುವುದಿಲ್ಲ ಎಂದರು.

ರಾಜ್ಯದಲ್ಲಿ ಶೇ. 2ರಷ್ಟು ಭೂಮಿ ಮಾತ್ರ ಕೈಗಾರಿಕೆಗೆ ಬಳಕೆ ಮಾಡಿದ್ದೇವೆ. ಕೈಗಾರಿಕೆಗೆ ಅನುಕೂಲ ಕಲ್ಪಿಸಿಕೊಡಲು ಈ ಕಾನೂನು ರೂಪಿಸಿದ್ದೇವೆ ಎಂದರು.

ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ರಮೇಶ್ ಗೌಡ, ಭೂ ಸುಧಾರಣಾ ಕಾಯ್ದೆಯಲ್ಲಿ 79 ಎ, ಬಿ ನಿಬಂಧನೆಗಳನ್ನು ತೆಗೆದು ಹಾಕಿರುವುದನ್ನು ಸ್ವಾಗತಿಸುತ್ತೇನೆ ಎಂದರು.

## ಮಾದಕ ವಸ್ತುಗಳ ನಿಯಂತ್ರಣಕ್ಕೆ ಕ್ರಮ – ಗೃಹ ಸಚಿವ ಬಸವರಾಜ್ ಬೊಮ್ಮಾಯಿ

**ಬೆಂಗಳೂರು, ಡಿಸೆಂಬರ್ 08 (ಕರ್ನಾಟಕ ವಾರ್ತೆ):**

ರಾಜ್ಯದಲ್ಲಿ ಮಾದಕ ವಸ್ತುಗಳ ಪಿಡುಗನ್ನು ನಿರ್ಮೂಲನೆ ಮಾಡಲು ಕಠಿಣ ಕ್ರಮ ಕೈಗೊಳ್ಳಲಾಗುತ್ತಿದ್ದು, ಸಾರ್ವಜನಿಕರು ಸಹ ಒಟ್ಟಾಗಿ ಸೇರಿ ಈ ಪಿಡುಗಿನ ವಿರುದ್ದ ಕೈ ಜೋಡಿಸಬೇಕೆಂದು ಗೃಹ ಸಚಿವ ಬಸವರಾಜ್ ಬೊಮ್ಮಾಯಿ ಅವರು ತಿಳಿಸಿದರು

ಇಂದು ವಿಧಾನಸಭೆಯ ಪ್ರಶ್ನೋತ್ತರ ಅವಧಿಯಲ್ಲಿ ರಾಜ್ಯದಲ್ಲಿ ಮಾದಕ ದ್ರವ್ಯದ ಪಿಡುಗು ದಿನೇ ದಿನೇ ಹೆಚ್ಚಾಗುತ್ತಿದೆ. ಡ್ರಗ್ಸ್ ನಿಯಂತ್ರಣ ಕಾಯ್ದೆಯ ಅಡಿಯಲ್ಲಿ ಇಲ್ಲಿಯವರೆಗೆ ಎಷ್ಟು ಪ್ರಕರಣಗಳು ದಾಖಲಾಗಿವೆ. ಡ್ರಗ್ಸ್ ನಿಯಂತ್ರಣ ಕಾಯ್ದೆಗೆ ತಿದ್ದುಪಡಿ ತಂದು ಬಿಗಿಯಾದ ಕಾನೂನು ತರಲು ಸರ್ಕಾರ ತೆಗೆದುಕೊಂಡ ಕ್ರಮದ ಕುರಿತು ವಿಧಾನ ಸಭೆಯ ಸದಸ್ಯ ಈಶ್ವರ್ ಖಂಡ್ರೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವರು ಸರ್ಕಾರವು ಮಾದಕ ದ್ರವ್ಯಗಳ ಮಾರಾಟ, ಸಾಗಣೆ ಮತ್ತು ಸೇವನೆಯನ್ನು ತಡೆಗಟ್ಟಲು ಹಾಗೂ ನಿಯಂತ್ರಿಸಲು ಎನ್.ಡಿ.ಪಿ.ಎಸ್. ಕಾಯ್ದೆಯನ್ನು ಜಾರಿಗೆ ತಂದಿದ್ದು, ಈ ಕಾಯ್ದೆಗೆ ಇನ್ನು ಹೆಚ್ಚಿನ ಬಲ ನೀಡಲು ತಿದ್ದುಪಡಿ ತರಲು ಇಚ್ಚಿಸಿದ್ದು, ಈ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತೆದೆ ಎಂದು ಉತ್ತರಿಸಿದರು.

ಶಾಲಾ ಕಾಲೇಜು ಮತ್ತು ವಿಶ್ವ ವಿದ್ಯಾಲಯಗಳ ಹಂತದಲ್ಲಿ ಮಾದಕ ವಸ್ತುಗಳ ಬಳಕೆ ಮತ್ತು ಸಾಗಣೆ ತಡೆಗಟ್ಟಲು ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡಂತೆ, ಸಮಿತಿಯನ್ನು ರಚಿಸಿ ಕರ್ತವ್ಯ ನಿಗದಿಪಡಿಸಲಾಗಿದೆ. ಪೋಲೀಸ್ ಆಯುಕ್ತರು, ಬೆಂಗಳೂರು ನಗರ ಮತ್ತು ವಲಯ ಪೋಲೀಸ್ ಮಹಾ ನಿರೀಕ್ಷಕರುಗಳಿಗೆ ಪಿ.ಐ.ಟಿ, ಎನ್.ಡಿ.ಪಿ.ಎಸ್. ಕಾಯ್ದೆ, 1988ರ ಕಲಂ 3(1)ರಡಿಯಲ್ಲಿ ಮುಂಜಾಗ್ರತಾ ಕ್ರಮವಾಗಿ ರೂಢಿಗತ ಅಪರಾಧಿಗಳನ್ನು ಬಂಧಿಸಲು ಅಧಿಕಾರ ನೀಡಲಾಗಿದೆ.

ಡ್ರಗ್ ಮಾಫಿಯಾ ವಿರುದ್ಧ ಸಮರ ಸಾರಿದ್ದು, ಯಾವುದೇ ಒತ್ತಡಕ್ಕೆ ಮಣಿಯದೆ ಪ್ರಕರಣಗಳಲ್ಲಿ ಭಾಗಿಯಾದವರ ವಿರುದ್ದ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಡ್ರಗ್ಸ್ ಪ್ರಕರಣಗಳ ತನಿಖೆಯನ್ನು ತೀವ್ರಗೊಳಿಸಲು ನಾರ್ಕೋಟಿಕ್ ಲ್ಯಾಬ್‌ಗಳನ್ನು ಹೆಚ್ಚಳ ಮಾಡಲಾಗುವುದು. ಸಿಂಥೆಟಿಕ್ ಡ್ರಗ್ಸ್ ಪ್ರಕರಣಗಳು ಹೆಚ್ಚಾಗುತ್ತಿದ್ದು ಇದರ ಬಗ್ಗೆ ಈಗಾಗಲೇ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಮಾದಕ ವಸ್ತು ಪಿಡುಗನ್ನು ನಿಯಂತ್ರಿಸುವ ಸಂಬಂಧ ಗೃಹ ಸಚಿವರು ನೀಡಿದ ಉತ್ತರಕ್ಕೆ ಸಭಾಧ್ಯಕ್ಷರು ಅಭಿನಂದನೆಗಳನ್ನು ಸಲ್ಲಿಸಿದರು.

## ಒಂದು ರಾಷ್ಟ್ರ ಒಂದು ಚುನಾವಣೆ ಚರ್ಚೆ ಮುಂದೂಡಿಕೆ

**ಬೆಂಗಳೂರು, ಡಿಸೆಂಬರ್ 08 (ಕರ್ನಾಟಕ ವಾರ್ತೆ):**

ಡಿಸೆಂಬರ್ 14 ಮತ್ತು 15ರಂದು ವಿಧಾನಸಭೆಯಲ್ಲಿ ಹಮ್ಮಿಕೊಳ್ಳಲಾಗಿದ್ದ "ಒಂದು ರಾಷ್ಟ್ರ ಒಂದು ಚುನಾವಣೆ" ಕುರಿತಾದ ವಿಶೇಷ ಚರ್ಚೆಯನ್ನು ಮುಂದಿನ ಅಧಿವೇಶನದಲ್ಲಿ ಚರ್ಚಿಸಲು ಇಂದು ತೀರ್ಮಾನಿಸಲಾಯಿತು.

ರಾಜ್ಯದಲ್ಲಿ ಪ್ರಸ್ತುತ ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣಾ ನಡಯುತ್ತಿರುವುದರಿಂದ ಪ್ರಸ್ತುತ ಅಧಿವೇಶನವನ್ನು ಡಿಸೆಂಬರ್ 15ರ ಬದಲಾಗಿ ಡಿಸೆಂಬರ್ 10 ರಂದು ಮುಕ್ತಾಯಗೊಳಿಸಲು ತೀರ್ಮಾನಿಸಲಾಗಿದೆ ಎಂದು ಸಭಾಧ್ಯಕ್ಷರು ಸಭೆಗೆ ತಿಳಿಸಿದರು.

"ಒಂದು ರಾಷ್ಟ್ರ ಒಂದು ಚುನಾವಣೆ" ಕುರಿತಾದ ಚರ್ಚೆಯು ಮಹತ್ವಪೂರ್ಣವಾದ ಸಾರ್ವಜನಿಕ ಚರ್ಚೆಯಾಗಿದ್ದು, ಸದರಿ ವಿಷಯದ ಕುರಿತು ಶಾಸಕರು ಗಂಭೀರವಾದ ಹಾಗೂ ಅರ್ಥಪೂರ್ಣ ಕೊಡುಗೆ ನೀಡಬೇಕು ಎಂದರು.

## ವಿಧೇಯಕಗಳ ಮಂಡನೆ

**ಬೆಂಗಳೂರು, ಡಿಸೆಂಬರ್ 08 (ಕರ್ನಾಟಕ ವಾರ್ತೆ):**

2020ನೇ ಸಾಲಿನ ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ವೇತನ, ಭತ್ಯೆಗಳು ಮತ್ತು ಸಂಕೀರ್ಣ ಉಪಬಂಧಗಳ (ನಿರಸನಗೊಳಿಸುವ) ವಿಧೇಯಕವನ್ನು ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವ ಮಾಧುಸ್ವಾಮಿ ಅವರು ವಿಧಾನ ಸಭೆಯಲ್ಲಿ ಇಂದು ಮಂಡಿಸಿದರು.

ಇದೇ ಸಂದರ್ಭದಲ್ಲಿ 2020ನೇ ಸಾಲಿನ ಕರ್ನಾಟಕ ಸ್ಟಾಂಪ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಕಂದಾಯ ಸಚಿವ ಆರ್ ಅಶೋಕ ಅವರ ಪರವಾಗಿ ಕಾನೂನು , ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವ ಮಾಧುಸ್ವಾಮಿ ವಿಧಾನ ಸಭೆಯಲ್ಲಿ ಮಂಡಿಸಿದರು.

1957ರ ಕರ್ನಾಟಕ ಅಧಿನಿಯಮ 34 ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ. ರಾಜ್ಯ ಸರ್ಕಾರವು ಕರ್ನಾಟಕ ಕೈಗಾರಿಕಾ ನೀತಿ 2020-25ರಲ್ಲಿ ಪ್ರಸ್ತಾವಿಸಿರುವ ಕೈಗಾರಿಕಾ ಬೆಳವಣಿಗೆಗೆ ಉತ್ತೇಜನ ನೀಡಲು ಮತ್ತು 2020-21ರ ಆಯವ್ಯಯ ಭಾಷಣದಲ್ಲಿ ಪ್ರಸ್ತಾವಿಸಿರುವ ಮೂವತ್ತೈದು ಲಕ್ಷದವರೆಗಿನ ಫ್ಲಾಟ್ ಅಥವಾ ಅಪಾರ್ಟ್‌ಮೆಂಟಿನ ಮೊದಲ ಮಾರಾಟಕ್ಕೆ ಸ್ಟಾಂಪು ತೆರಿಗೆಯನ್ನು ಕಡಿಮೆ ಮಾಡುವ ಕುರಿತಾಗಿ ವಿಧೇಯಕದಲ್ಲಿ ತಿಳಿಸಿದೆ.

## ವಿಧೇಯಕ ಅಂಗೀಕಾರ

**ಬೆಂಗಳೂರು, ಡಿಸೆಂಬರ್ 08 (ಕರ್ನಾಟಕ ವಾರ್ತೆ):**

ಕರ್ನಾಟಕ ಭೂ ಸುಧಾರಣೆಗಳ (ಎರಡನೇ ತಿದ್ದುಪಡಿ ವಿಧೇಯಕ) 2020 ಅಂಗೀಕಾರಗೊಂಡಿತು. ಕಂದಾಯ ಸಚಿವ ಆರ್. ಅಶೋಕ್ ಅವರು ವಿಧೇಯಕ ಮಂಡಿಸಿದರು. ಪರ ವಿರೋಧದ ನಡುವೆಯೂ ವಿಧೇಯಕ ಅಂಗೀಕಾರಗೊಂಡಿತು.

## *"ಲೋಕ್-ಅದಾಲತ್"*

ಬೆಂಗಳೂರು, ಡಿಸೆಂಬರ್ 8 ( ಕರ್ನಾಟಕ ವಾರ್ತೆ ) :

ದಿನಾಂಕ 19-12-2020 ರಂದು ರಾಜ್ಯಾದ್ಯಂತ ಮೆಗಾ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದ್ದು, ಸದರಿ ಲೋಕ್ ಅದಾಲತ್‌ನಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಲು ಇಚ್ಛಿಸಿದಲ್ಲಿ ಮುಂಚಿತವಾಗಿ ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ/ತಾಲ್ಲೂಕು ಕಾನೂನು ಸೇವೆಗಳ ಸಮಿತಿಗಳಿಗೆ ಆನ್‌ಲೈನ್/ವಿಡಿಯೋ ಕಾನ್ಫರೆನ್ಸ್/ಇ-ಮೇಲ್/ಎಸ್.ಎಂ.ಎಸ್./ವಾಟ್ಸ್‌ಅಪ್/ಎಲೆಕ್ಟ್ರಾನಿಕ್ ಮೋಡ್ /ಖುದ್ದಾಗಿ ಹಾಜರಾಗುವ ಮುಖಾಂತರ ಭೇಟಿ ನೀಡಿ ಮಾಹಿತಿ ಪಡದುಕೊಳ್ಳಬೇಕೆಂದು ಹಾಗೂ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಸಂಬಂಧಪಟ್ಟ ಉಚ್ಛನ್ಯಾಯಾಲಯಗ ಕಾನೂನು ಸಏವೆಗಳ ಸಮಿತಿಯನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳನ್ನು ಮತ್ತು ತಾಲ್ಲೂಕು ಕಾನೂನು ಸೇವೆಗಳ ಸಮಿತಿಗಳನ್ನು ಅಥವಾ ಖಾಯಂ ಜನತಾ ನ್ಯಾಯಾಲಯಳನ್ನು ಆನ್‌ಲೈನ್/ವಿಡಿಯೋ ಕಾನ್ಫರೆನ್ಸ್/ಇಮೇಲ್/ಎಸ್.ಎಂ.ಎಸ್./ವಾಟ್ಸ್‌ಅಪ್/ಎಲೆಕ್ಟ್ರಾನಿಕ್ ಮೋಡ್/ಖುದ್ದಾಗಿ ಹಾಜರಾಗುವ ಮೂಲಕ ಸಂಪರ್ಕಿಸಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ.

<u>ಹೆಚ್ಚಿನ ಮಾಹಿತಿಗಾಗಿ:</u> ನ್ಯಾಯ ಸಂಯೋಗ, ಕಾನೂನು ನೆರವು ಘಟಕ (ಬಹುವಿಧ ಸೇವೆಗಳು – ಒಂದೇ ಸೂರಿನ ಅಡಿಯಲ್ಲಿ) ನ್ಯಾಯ ದೇಗುಲ', ಮೊದಲನೆ ಮಹಡಿ, ಹೆಚ್.ಸಿದ್ಧಯ್ಯ ರಸ್ತೆ, ಬೆಂಗಳೂರು-560027, ದೂರವಾಣಿ ಸಂಖ್ಯೆ: **080-22111730 website : www.kslsa.kar.nic.in** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳು ಅಥವಾ ತಾಲ್ಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿಯವರನ್ನು ಸಂಪರ್ಕಿಸಿ. <u>ಸಹಾಯವಾಣಿ ಸಂಖ್ಯೆ:</u> **1800-425-90900**

## "MEGA LOK-ADALAT"

***Bengaluru, December 8 (Karnataka Information)***

The **Mega Lok-Adalat** is being held on **19.12.2020** in all court complexes in the State. The litigants of Pre-litigation Cases are requested to approach the concerned Legal Services Authorities/ Committees prior to the date of Mega Lok-Adalat through **on-line / video conference / mail/ SMS/ WhatsApp/ electronic mode and physically** to resolve their disputes. The litigants whose cases are pending in courts are requested to approach High Court Legal Services Committee, District Legal Services Authorities in the District Headquarters, Taluka Legal Services Committees in every Taluka and the Permanent Lok Adalats of the State for taking the benefit of quick and inexpensive settlement of their litigation/ pre-litigation matters through **on-line / video conference / mail/ SMS/ WhatsApp/ electronic mode** and physically in the **Mega Lok-Adalat.**

**For more information contact:** Nyaya Samyoga, Legal Assistance Establishment (Multiple Services – Single point Establishment)- 'Nyaya Degula', 1st Floor, H. Siddaiah Road, Bengaluru-560027, Telephone : 080-22111730, website: www.kslsa.kar.nic.in Member Secretaries of the District Legal Services Authorities and Taluka Legal Services Committees in the State. **Helpline No. 1800-425-90900**